ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಸಣ್ಣ ನೀರಾವರಿ ಇಲಾಖೆ ಯೋಜನೆಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

729 (889) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ 3 ವರ್ಷಗಳಲ್ಲಿ ಚನ್ನರಾಯಪಟ್ಟಣ ತಾಲ್ಲೂಕಿನ ಸಣ್ಣ ನೀರಾವರಿ ಇಲಾಖೆಯಿಂದ ಕೈಗೆತ್ತಿಕೊಳ್ಳಲಾದ ನೀರಾವರಿ ಯೋಜನೆಗಳು/ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ಮಂಜೂರಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು; (ಕಾಮಗಾರಿವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳನ್ನು ಕೈಗೊಂಡಿರುವ ಗುತ್ತಿಗೆದಾರರ ವಿವರ/ಏಜೆನ್ಸಿಗಳ ವಿವರ ನೀಡುವುದು ; ಈ ಕಾಮಗಾರಿಗಳು ಪ್ರಸ್ತುತ ಯಾವ ಯಾವ ಹಂತಗಳಲ್ಲಿವೆ ; (ಕಾಮಗಾರಿವಾರು ಸಂಪೂರ್ಣ ವಿವರ ನೀಡುವುದು)

(ಇ) ಕಳೆದ 3 ವರ್ಷಗಳಲ್ಲಿ ಚನ್ನರಾಯಪಟ್ಟಣ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೆತ್ತಿಕೊಳ್ಳಲಾದ ನೀರಾವರಿ ಯೋಜನೆಗಳು/ಕಾಮಗಾರಿಗಳಿಗಾಗಿ ಎಷ್ಟು ಎಕರೆ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗಿದೆ ; ರೈತರಿಂದ ಪಡೆದ ಜಮೀನುಗಳಿಗೆ ಎಷ್ಟು ಪರಿಹಾರ ನೀಡಲಾಗಿದೆ ? (ಕಾಮಗಾರಿ ಹೆಸರು, ರೈತನ ಹೆಸರು, ಗ್ರಾಮ, ಪರಿಹಾರದ ಮೊತ್ತದ ಸಂಪೂರ್ಣ ವಿವರ ನೀಡುವುದು)